## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಮಂಜುನಾಥ ಅಂಗಡಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಸಿದ್ದಾಪುರ ಗ್ರಾಮ ಪಂಚಾಯಿತಿ, ಗಂಗಾವತಿ ತಾಲ್ಲೂಕು, ಕೊಪ್ಪಳ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14(ಎ) ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

**ಓದಲಾಗಿದೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು, ಇವರ **D.O.No.Compt/Uplok/GLB-9253/2017/ARE-5,** ದಿನಾಂಕ:09-07-2019 .

**ಪ್ರಸ್ತಾವನೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ರವರು ದಿನಾಂಕ: 04-07-2019 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(3) ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ಮಲ್ಲನಗೌಡ/ಬಿನ್ ಮಳಕಾಜಪ್ಪ ಹೊಸಮನಿ, 2ನೇ ವಾರ್ಡ್, ಸಿದ್ದಾಪುರ ಗ್ರಾಮ, ಗಂಗಾವತಿ ತಾಲ್ಲೂಕು, ಕೊಪ್ಪಳ ಜಿಲ್ಲೆ, (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ರವರು ತಮ್ಮ ದೂರಿನಲ್ಲಿ ಕೊಪ್ಪಳ ಜಿಲ್ಲೆ ಮತ್ತು ಗಂಗಾವತಿ ತಾಲ್ಲೂಕು, ಸಿದ್ದಾಪುರ ಗ್ರಾಮ ಪಂಚಾಯತಿಯ ಪಂಚಾಯಿತಿ ಅಭಿವೃದ್ಧಿಕಾರಿಯಾದ ಶ್ರೀ ಮಂಜುನಾಥ ಅಂಗಡಿ, (ಇನ್ನು ಮುಂದೆ 'ಎದುರುದಾರರು' ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ಕರ್ತವ್ಯ ಲೋಪದ ಬಗ್ಗೆ ನೀಡಿದ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿದ್ದಿದೆ.

**ದೂರಿನ ಸಂಕ್ಷಿಪ್ತ ವಿವರಣೆ:-**

ಕೊಪ್ಪಳ ಜಿಲ್ಲೆ ಮತ್ತು ಗಂಗಾವತಿ ತಾಲ್ಲೂಕು ಸಿದ್ದಾಪುರ ಗ್ರಾಮ ಪಂಚಾಯಿತಿಯಲ್ಲಿ ಇವರು 2012,2013 ಮತ್ತು 2014ನೇ ಸಾಲಿನ ಸಂಪೂರ್ಣ ನೈರ್ಮಲ್ಯ ಅಂದೋಲನ(ಎಸ್‌ಬಿಎಂ)ಅಭಿಯಾನ ಯೋಜನೆಯಡಿಯಲ್ಲಿ ಶೌಚಾಲಯಗಳಿಗೆ ಸಂಬಂಧಿಸಿದ ಚೆಕ್‌ಗಳನ್ನು ನಿಜವಾದ ಫಲಾನುಭವಿಗಳಿಗೆ ನೀಡದೆ ನಕಲಿ ಫಲಾನುಭವಿಗಳನ್ನು ಸೃಷ್ಟಿಸಿ ಚೆಕ್‌ಗಳನ್ನು ವಿತರಿಸಿದ್ದು ಮತ್ತು ಶೌಚಾಲಯಗಳನ್ನು ನಿರ್ಮಾಣ ಮಾಡದೇ ತಮಗೆ ಸಹಕರಿಸಿದವರೆಗೆ ಹಾಗೂ ಸದಸ್ಯರು ಸೂಚಿಸಿದವರಿಗೆ ಚೆಕ್‌ಗಳನ್ನು ನೀಡಿ ಪುನ: 2015-16ನೇ ಸಾಲಿನಲ್ಲಿ ಇದೇ ರೀತಿ ಎಸ್‌ಬಿಎಂ ಯೋಜನೆಯಡಿ ಸುಮಾರು 100 ಚೆಕ್‌ಗಳನ್ನು ಅನಧಿಕೃತವಾಗಿ ವಿತರಿಸಿರುತ್ತಾರೆಂದು ದೂರು ಸಲ್ಲಿಸಿರುತ್ತಾರೆ.

**ದೂರಿಗೆ ಎದುರುದಾರರಿಂದ ಆಕ್ಷೇಪಣೆಯನ್ನು ಕೇಳಲಾಗಿ ತಮ್ಮ ಮೇಲಿನ ಆಪಾದನೆಗಳನ್ನು ಎದುರುದಾರರು ಅಲ್ಲಗಳೆದ್ದು,**

**ಕಡತ ಮತ್ತು ದಾಖಲೆಗಳನ್ನು ಕೂಲಂಕುಷವಾಗಿ ಪರಿಶೀಲಿಸಲಾಗಿ, ಈ ಕೆಳಕಂಡ ಅಂಶಗಳು** ಕಂಡುಬಂದಿವೆಯೆಂದು ತಿಳಿಸಿರುತ್ತಾರೆ. ಸಿದ್ದಾಪುರ ಗ್ರಾಮ ಪಂಚಾಯತಿಗೆ ಸಂಬಂಧಿಸಿದಂತೆ ಕ್ರಮ ಸಂಖ್ಯೆ: 190ರಿಂದ 230 ರವರೆಗೆ ವಿತರಿಸಿದ ಚೆಕ್ ನಂ.160440 ರಿಂದ 160480ರಲ್ಲಿ ಫಲಾನುಭವಿಗಳ ವಿವರಗಳನ್ನು ನೀಡಿರುವುದಿಲ್ಲ

- ಚೆಕ್ ವಿತರಣೆ ಮಾಡಿರುವ ಪಟ್ಟಿಯಲ್ಲಿ ಫಲಾನುಭವಿಗಳ ವಿವರಗಳು ಅಂದರೆ ಬಿಪಿಎಲ್ ಕಾರ್ಡ್ ನಂಬರ್, ಜಾತಿ, ಅಂಗವಿಕಲರ ಮತ್ತು ಸಬ್ಸಿಡಿ ಮೊತ್ತದ ವಿವರಗಳನ್ನು ದಾಖಲಿಸಿರುವುದಿಲ್ಲ.
- ಫಲಾನುಭವಿಗಳ ಸಹಿಗಳನ್ನು ಪಡೆದಿರುವುದಿಲ್ಲ.
- ಕೆಲವು ಚೆಕ್‌ಗಳ ದಿನಾಂಕ ಮತ್ತು ಮೊತ್ತವನ್ನು ಬರೆದಿರುವುದಿಲ್ಲ

- 80 ಚೆಕ್‌ಗಳಿಗೆ ಸಂಬಂಧಿಸಿದಂತೆ ಫಲಾನುಭವಿಗಳ ಹೆಸರು ಮತ್ತು ಅವರ ವಿವರಗಳನ್ನು ಹಾಗೂ ಸಹಿಗಳನ್ನು ಪಟ್ಟಿಯಲ್ಲಿ ದಾಖಲಿಸಿರುವುದಿಲ್ಲ

ಈ ಹಿನ್ನಲೆಯಲ್ಲಿ ಎದುರುದಾರರು ಸರ್ಕಾರಿ ನೌಕರರಾಗಿದ್ದು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966ರ ನಿಯಮ 3(1)ರ ಅಡಿಯಲ್ಲಿ ದುರ್ನಡತೆ/ದುರ್ವರ್ತನೆ ಕಂಡು ಬರುವುದರಿಂದ, ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಹಾಗೂ ಪ್ರಕರಣವನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ 14(ಎ) ರಡಿ ಈ ಸಂಸ್ಥೆಗೆ ವಹಿಸಬೇಕೆಂದು ಕೋರಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ಪ್ರಸ್ತಾವನೆಯನ್ನು ಪರಿಶೀಲಿಸಿದ್ದು, ಸದರಿ ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಎದುರುದಾರರಾದ, ಕೊಪ್ಪಳ ಜಿಲ್ಲೆ ಮತ್ತು ಗಂಗಾವತಿ ತಾಲ್ಲೂಕು, ಸಿದ್ದಾಪುರ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಾಗಿದ್ದ ಶ್ರೀ ಮಂಜುನಾಥ ಅಂಗಡಿ, ಇವರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14(ಎ) ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/324/ಗ್ರಾಪಂಕಾ/2019</u>**
**<u>ಬೆಂಗಳೂರು, ದಿನಾಂಕ: 15 -10-2019.</u>**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಕೊಪ್ಪಳ ಜಿಲ್ಲೆ ಮತ್ತು ಗಂಗಾವತಿ ತಾಲ್ಲೂಕು ಸಿದ್ದಾಪುರ ಗ್ರಾಮ ಪಂಚಾಯತ್‌ನ ಪಂಚಾಯತ್ ಅಭಿವೃದ್ಧಿ ಅಧಿಕಾರಿಯಾಗಿದ್ದ ಶ್ರೀ ಮಂಜುನಾಥ ಅಂಗಡಿ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14(ಎ) ರಡಿ ಮಾನ್ಯ ಉಪಲೋಕಾಯುಕ್ತರು ರವರಿಗೆ ವಹಿಸಿ ಆದೇಶಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು ಆಪಾದಿತರಿಗೆ ನಿಯಮಾನುಸಾರ ಸೂಕ್ತ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

Narayan Dg. 15/10/19

(ಡಿ.ಜಿ. ನಾರಾಯಣ)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

<u>ಗೆ,</u>

1. ಮಹಾಲೇಖಪಾಲರು, ಬೆಂಗಳೂರು, ಕರ್ನಾಟಕ.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. <u>(ಪುಟ 1 ರಿಂದ 18 ರವರೆಗೆ ಮೂಲ ದಾಖಲೆಗಳನ್ನು ಇವರೊಂದಿಗೆ ಲಗತ್ತಿಸಿ ಹಿಂದಿರುಗಿಸಿದೆ).</u>
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಕೊಪ್ಪಳ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಗಂಗಾವತಿ, ಕೊಪ್ಪಳ ಜಿಲ್ಲೆ
6. ಶ್ರೀ ಮಂಜುನಾಥ ಅಂಗಡಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಸಿದ್ದಾಪುರ ಗ್ರಾಮ ಪಂಚಾಯಿತಿ, ಗಂಗಾವತಿ ತಾಲ್ಲೂಕು, ಕೊಪ್ಪಳ ಜಿಲ್ಲೆ
7. ಗಣಕ ಕೋಶ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.